File No.DPARAR-KTV/26/2020-DPAR AR-INSP-DPAR AR SEC

**ಕರ್ನಾಟಕ ಸರ್ಕಾರ**

ಸಂಖ್ಯೆ: ಸಿಆಸುಇ 26 ಕತವ 2020

ಕರ್ನಾಟಕ ಸರ್ಕಾರ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು,ದಿನಾಂಕ:27/04/2020

**ಸುತ್ತೋಲೆ**

**ವಿಷಯ:** ಬಯೋಮೆಟ್ರಿಕ್ ಹಾಜರಾತಿ ವ್ಯವಸ್ಥೆಯಲ್ಲಿ ತಾತ್ಕಾಲಿಕವಾಗಿ ವಿನಾಯಿತಿ ನೀಡುವ ಕುರಿತು.

*****

ಬಯೋಮೆಟ್ರಿಕ್ ಹಾಜರಾತಿ ವ್ಯವಸ್ಥೆಯಲ್ಲಿ ತಾತ್ಕಾಲಿಕವಾಗಿ ವಿನಾಯಿತಿ ನೀಡುವ ಕುರಿತು ಇದೇ ಸಮ ಸಂಖ್ಯೆಯ ಸುತ್ತೋಲೆ ದಿನಾಂಕ 16.03.2020ರ ಕಡೆ ಗಮನ ಸೆಳೆಯುತ್ತಾ, ರಾಜ್ಯದ ಕೆಲವೊಂದು ಕಡೆ ಕರೋನಾ ವೈರಾಣು ಸಮಸ್ಯೆ ಕಂಡುಬಂದ ಹಿನ್ನೆಲೆಯಲ್ಲಿ ಸಚಿವಾಲಯ ಹಾಗೂ ಇನ್ನಿತರ ಸರ್ಕಾರಿ ಕಚೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಅಧಿಕಾರಿ / ಸಿಬ್ಬಂದಿಗಳ ಆರೋಗ್ಯದ ದೃಷ್ಟಿಯಿಂದ 31.03.2020ರ ವರೆಗೆ ಬಯೋಮೆಟ್ರಿಕ್ ನಲ್ಲಿ ಹಾಜರಾತಿ ನಮೂದಿಸುವಲ್ಲಿ ವಿನಾಯಿತಿ ನೀಡಲಾಗಿತ್ತು.

ಪ್ರಸ್ತುತ ರಾಜ್ಯದಲ್ಲಿ ಇನ್ನು ಹಲವಾರು ಜಿಲ್ಲೆಗಳಲ್ಲಿ ಕೊರೋನ ವೈರಸ್ ಸೋಂಕಿತರ ಪ್ರಕರಣಗಳು ವರದಿಯಾಗುತ್ತಿದ್ದು, ಇನ್ನು ಪೂರ್ಣವಾಗಿ ಕೊರೋನ ವೈರಸ್ ಸೋಂಕಿನಿಂದ ಹೊರಬಾರದಿರುವುದರಿಂದ ರಾಜ್ಯದ ಸರ್ಕಾರದ ಅಧಿಕಾರಿ / ಸಿಬ್ಬಂದಿಗಳು ಬಯೋಮೆಟ್ರಿಕ್ ಹಾಜರಾತಿಯನ್ನು 31.05.2020ರ ಅಂತ್ಯದವರೆಗೂ ಹಾಜರಾತಿ ನಮೂದಿಸುವಲ್ಲಿ ವಿನಾಯಿತಿ ನೀಡಲಾಗಿದೆ. ಹಾಗೂ ಅಧಿಕಾರಿ / ಸಿಬ್ಬಂದಿಗಳು ಹಾಜರಾತಿ ಪುಸ್ತಕದಲ್ಲಿ ಹಾಜರಾತಿಯನ್ನು ನಿರ್ವಹಿಸುವಂತೆ ಹಾಗೂ ಆಯಾಯ ಇಲಾಖೆಯ ನೋಡಲ್ ಅಧಿಕಾರಿಗಳು ಈ ಕುರಿತು ಅಧಿಕಾರಿ / ಸಿಬ್ಬಂದಿಗಳ ಹಾಜರಾತಿಯನ್ನು ಪರಿಶೀಲಿಸುವಂತೆ ಸೂಚಿಸಿದೆ.

ಸ್ವರ್ಣಲತ ಭಂಡಾರಿ 27/4/2020
(ಸ್ವರ್ಣಲತ ಎಂ. ಭಂಡಾರಿ)
ಸರ್ಕಾರದ ಉಪ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಡಳಿತ ಸುಧಾರಣೆ)

**ಗೆ:**

1. ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ,ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ ಪ್ರಧಾನ ಕಾರ್ಯದರ್ಶಿಗಳು ಮತ್ತು ಕಾರ್ಯದರ್ಶಿಗಳು. . . . ಇವರಿಗೆ ಕಳುಹಿಸುತ್ತಾ, ತಮ್ಮ ಅಧೀನ ಇಲಾಖೆ / ನಿಗಮ ಮಂಡಳಿ ಹಾಗೂ ಇತರೆ ಕಚೇರಿಗಳಿಗೆ ಈ ಕುರಿತು ಸೂಕ್ತ ನಿರ್ದೇಶನ ನೀಡುವಂತೆ ಕೋರಿದೆ.

**ಪ್ರತಿ:**

1. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು ಸಿಆಸುಇ(ಆಸು),ಬಹುಮಹಡಿ ಕಟ್ಟಡ.